ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಆಶ್ರಮ ಶಾಲೆಗಳ ಸಂಖ್ಯಾವಾರಯ ವಿವರದ ಬಗ್ಗೆ

40 (93) : ಶ್ರೀ ಪದ್ಮನಾಭ ಕೊಟ್ಟಾರಿ ಕೆ. (ವಿಟ್ಲ) ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಯಲ್ಲಿರುವ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆಯ ಆಶ್ರಮ ಶಾಲೆಗಳು ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

ಆ) ಆಶ್ರಮ ಶಾಲೆಗಳು ಮೂಲಕ ಎಷ್ಟು ಬಾಲಕ-ಬಾಲಕಿಯರ ವ್ಯಾಸಂಗಕ್ಕೆ ಅನುಕೂಲ ಮಾಡಿಕೊಡಲಾಗಿದೆ.

ಇ) ಇನ್ನೂ ಹೆಚ್ಚಿನ ಆಶ್ರಮ ಶಾಲೆಗಳನ್ನು ಪ್ರಾರಂಭಿಸುವ ಯೋಜನೆ ಸರ್ಕಾರದ ಮುಂದಿದೆಯೆ?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಯವರು)

ಅ) ಮತ್ತು ಆ) ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ತಾಲ್ಲೂಕಿನ ಬಜೆವೆ ಗ್ರಾಮದಲ್ಲಿ ಹಿಂದುಳಿದ ವರ್ಗಗಳ ಇಲಾಖೆಯ ವತಿಯಿಂದ 25 ಸಂಖ್ಯಾಬಲದ ಒಂದು ಆಶ್ರಮ ಶಾಲೆಯನ್ನು ನಡೆಸಲಾಗುತ್ತಿದೆ. ಉಡುಪಿ ಜಿಲ್ಲೆಯಲ್ಲಿ ಯಾವುದೇ ಆಶ್ರಮ ಶಾಲೆ ಇರುವುದಿಲ್ಲ. 2004-05ನೇ ಸಾಲಿನಲ್ಲಿ ಮೇಲ್ಕಂಡ ಆಶ್ರಮ ಶಾಲೆಯಲ್ಲಿ 15 ಬಾಲಕಿಯರು ಹಾಗೂ 10 ಬಾಲಕರಿಗೆ ಪ್ರವೇಶ ನೀಡಲಾಗಿರುತ್ತದೆ.

ಇ) ಇಲ್ಲ.

ದಕ್ಷಿಣ ಕನ್ನಡ ಜಿಲ್ಲೆಯ ವಿಟ್ಲ ಕೇಂದ್ರದಲ್ಲಿ ಕ್ರೀಡಾಂಗಣ ನಿರ್ಮಾಣದ ಬಗ್ಗೆ

41 (95) : ಶ್ರೀ ಪದ್ಮನಾಭ ಕೊಠಾರಿ ಕೆ. (ವಿಟ್ಲ) ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲ್ಲೂಕು ವಿಟ್ಲ ಕೇಂದ್ರದಲ್ಲಿ ಕ್ರೀಡಾಂಗಣ ನಿರ್ಮಾಣ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ? (ವಿವರ ನೀಡುವುದು).

ಆ) ರಾಜ್ಯದ ಎಷ್ಟು ತಾಲ್ಲೂಕುಗಳಿಗೆ ಈಗಾಗಲೇ ಕ್ರೀಡಾಂಗಣ ಸೌಲಭ್ಯವನ್ನು ನಿರ್ಮಿಸಿಕೊಡಲಾಗಿದೆ ಮತ್ತು ಉಳಿದ ತಾಲ್ಲೂಕುಗಳಿಗೆ ಯಾವಾಗ ಕ್ರೀಡಾಂಗಣ ನಿರ್ಮಿಸಿಕೊಡಲಾಗುವುದು?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಯವರು)

ಅ) ಇಲ್ಲ.

ಆ) 107 ತಾಲ್ಲೂಕುಗಳಲ್ಲಿ ಕ್ರೀಡಾಂಗಣ ಸೌಲಭ್ಯವನ್ನು ನಿರ್ಮಿಸಿಕೊಡಲಾಗಿದೆ. (ಜಿಲ್ಲಾ ಕೇಂದ್ರ ಸಹಿತ), ಉಳಿದ ತಾಲ್ಲೂಕುಗಳಿಗೆ ಕ್ರೀಡಾಂಗಣ ನಿರ್ಮಿಸಲು ಕಾಲಾವಧಿ ನಿಗಧಿಪಡಿಸಿಲ್ಲ.

ಬಂಟ್ವಾಳ ತಾಲ್ಲೂಕಿನ ವಿಟ್ಲ ಕ್ಷೇತ್ರದಲ್ಲಿ ಪಂಚಾಯತ್ ರಸ್ತೆಗಳ ಅಭಿವೃದ್ಧಿಯ ಬಗ್ಗೆ

42 (94) : ಶ್ರೀ ಪದ್ಮನಾಭ ಕೊಟ್ಟಾರಿ ಕೆ. (ವಿಟ್ಲ) ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?